ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/20/ಇಸಿಎಸ್(2)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com
ದಿನಾಂಕ: 31.07.2024

**ಸುತ್ತೋಲೆ**

ವಿಷಯ: ಮೇ 2024ರ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ಥಿಯರಿ ವಿಷಯದ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ Soft Copy ಕಳುಹಿಸುತ್ತಿರುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೇ 2024ರ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ಥಿಯರಿ ವಿಷಯದ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಾಗಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿರುತ್ತಾರೆ. ಸದರಿ ವಿದ್ಯಾರ್ಥಿಗಳ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳಲ್ಲಿ, ಉತ್ತರ ಬರೆದಿರುವ ಪುಟಗಳ Soft Copy ಗಳನ್ನು ಸಂಬಂಧಿಸಿದ ಸಂಸ್ಥೆಯ ಇ-ಮೇಲ್ ವಿಳಾಸಕ್ಕೆ ಕಳುಹಿಸಲಾಗಿದ್ದು, ಪ್ರಾಂಶುಪಾಲರುಗಳು ಉತ್ತರ ಪತ್ರಿಕೆಗಳನ್ನು ಡೌನ್‌ಲೋಡ್ ಮಾಡಿಕೊಂಡು ಮುದ್ರಿಸಿ ದೃಢೀಕರಿಸಿ ವಿದ್ಯಾರ್ಥಿಗಳಿಗೆ ನೀಡಲು ಹಾಗೂ ಅವರಿಂದ ಸ್ವೀಕೃತಿ ಪತ್ರ ಪಡೆಯುವಂತೆ ಸೂಚಿಸಲಾಗಿದೆ.

ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಾಗಿ ಮಾತ್ರ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, Soft Copy ಮುದ್ರಿತ ಉತ್ತರ ಪತ್ರಿಕೆಗಳನ್ನು ಪಡೆದ 3 ದಿನಗಳೊಳಗಾಗಿ ನಿಗದಿತ ಶುಲ್ಕ 550/- ರೂಗಳನ್ನು ಖಜಾನೆ-II ಮೂಲಕ ಪಾವತಿಸಿ ಮರು ಮೌಲ್ಯಮಾಪನದ ಅರ್ಜಿಯನ್ನು ಪ್ರಿನ್ಸಿಪಾಲರ ಮುಖಾಂತರ ಖುದ್ದಾಗಿ ಅಥವಾ ಅಂಚೆ ಮೂಲಕ ಈ ಕಛೇರಿಗೆ ಸಲ್ಲಿಸುವಂತೆ ತಿಳಿಸಲಾಗಿದೆ. ಈ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರುವಂತೆ ತಿಳಿಸಲಾಗಿದೆ.

ಉತ್ತರ ಪತ್ರಿಕೆಗಳ ಫೋಟೋ ಪ್ರತಿಗಾಗಿ ಅರ್ಜಿ ಸಲ್ಲಿಸಿರುವ ಯಾವುದೇ ವಿದ್ಯಾರ್ಥಿಯ ಉತ್ತರ ಪತ್ರಿಕೆಯ Soft Copy ತಲುಪದಿದ್ದಲ್ಲಿ ಸಂಬಂಧಿಸಿದ ಸಂಸ್ಥೆಯ ಪ್ರಿನ್ಸಿಪಾಲರು, ಶ್ರೀಮತಿ ಪ್ರಸನ್ನ.ಕೆ ಹಿರಿಯ ತಾಂತ್ರಿಕ ಸಹಾಯಕರು, ತಾಂತ್ರಿಕ ಪರೀಕ್ಷಾ ಮಂಡಳಿ ಬೆಂಗಳೂರು (9845296946) ಇವರನ್ನು ಸಂಪರ್ಕಿಸುವಂತೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ-ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರ- ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ

Scanned with OKEN Scanner